ಜಾತಿ ಹಾಗೂ ಆದಾಯ ಪ್ರಮಾಣ ಪತ್ರ ನೀಡುವಲ್ಲಿ ವಿಳಂಬ

793 (1034) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ತಹಶೀಲ್ದಾರ್ ಕಾರ್ಯಾಲಯದಲ್ಲಿ ಜಾತಿ ಮತ್ತು ಆದಾಯ ಪ್ರಮಾಣಪತ್ರ ನೀಡುವಲ್ಲಿ ವಿಳಂಬವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಜಾತಿ ಮತ್ತು ಆದಾಯ ಪ್ರಮಾಣ ಪತ್ರ ದೊರೆಯದೆ ಇರುವುದರಿಂದ ಪ್ರವೇಶ ದೊರೆಕದೆ ವಿದ್ಯಾರ್ಥಿಗಳು ತೊಂದರೆಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಧಾರವಾಡ ಜಿಲ್ಲೆಯಲ್ಲಿ ಎಷ್ಟು ವಿದ್ಯಾರ್ಥಿಗಳು ಇಂತಹ ತೊಂದರೆ ಅನುಭವಿಸುತ್ತಿದ್ದಾರೆ

ಈ) ಹಾಗಿದ್ದಲ್ಲಿ, ಇವರಿಗೆ ಪ್ರವೇಶ ಸಿಗುವಂತಹ ಬೇರೆ ಅವಕಾಶ ಕಲ್ಪಿಸುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು, ಇಲ್ಲವಾದಲ್ಲಿ ಕಾರಣಗಳೇನು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) ಧಾರವಾಡ ಜಿಲ್ಲೆಯಲ್ಲಿ ನಾಲ್ಕು ತಾಲ್ಲೂಕುಗಳಲ್ಲಿ ನೆಮ್ಮದಿ ಯೋಜನೆ ಪ್ರಾರಂಭವಾಗಿರುವುದರಿಂದ ಹಾಗೂ ಶಾಲಾ ಕಾಲೇಜುಗಳು ಪ್ರಾರಂಭವಾಗಿರುವುದರಿಂದ ಒಮ್ಮೆಲೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪ್ರಮಾಣಪತ್ರ ಪಡೆಯಲು ತಹಶೀಲ್ದಾರ್ ಕಾರ್ಯಾಲಯಗಳಿಗೆ ಬರುತ್ತಿರುವುದರಿಂದ ಕೆಲವೊಂದು ಸಂದರ್ಭಗಳನ್ನು ಹೊರತುಪಡಿಸಿ ನಿಗದಿತ ಅವಧಿಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪೂರೈಸಲಾಗುತ್ತಿದೆ

ಆ) ಇಂಥಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ ಅವಶ್ಯಕ ದಾಖಲೆಗಳನ್ನು ಪೂರೈಸಿದ ವಿದ್ಯಾರ್ಥಿಗಳಿಗೆ ನಿಗದಿತ ಅವಧಿಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪೂರೈಸಲಾಗುತ್ತಿದೆ

ಇ) ಇಂಥಹ ಪ್ರಕರಣಗಳು ಗಮನಕ್ಕೆ ಬಂದಿರುವುದಿಲ್ಲ

ಈ) ಉದ್ಭವಿಸುವುದಿಲ್ಲ

ಅಂಗವಿಕಲರ ವಿಧವೆಯರ ಮತ್ತು ವೃದ್ಧಾಪ್ಯದ ಮಾಸಾಶನ ಬಯಸಿ ಬಂದಿರುವ ಅರ್ಜಿಗಳು